ಕನ್ನಡಪ್ರಭ
Online Newspaper Clipping Service
Dtd- Wednesday, 06th, November- 2019
Page No.03

# ಭ್ರಷ್ಟಾಚಾರ ನೀಗದೆ ದೇಶದ ಅಭಿವೃದ್ಧಿ ಅಸಾಧ್ಯ: ಡಾ.ಲಕ್ಷ್ಮಯ್ಯ ಅಭಿಪ್ರಾಯ

**ಕೋಲಾರ:** ಯಾವುದೇ ದೇಶದಲ್ಲಿ ಭ್ರಷ್ಟಾಚಾರ ನೀಗದ ಹೊರತು ದೇಶ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ ಎಂದು ಶ್ರೀ ದೇವರಾಜ್ ಅರಸು ಮೆಡಿಕೆಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಲಕ್ಷ್ಮಯ್ಯ ಹೇಳಿದರು.

ಭ್ರಷ್ಟಾಚಾರದ ವಿರುದ್ಧ ಅರಿವು ಮೂಡಿಸಲು ಶ್ರೀ ದೇವರಾಜ್ ಅರಸು ಮೆಡಿಕೆಲ್ ಕಾಲೇಜಿನ ಡಿಪಾರ್ಟ್‌ಮೆಂಟ್ ಆಫ್ ಫಿಜಿಯೋಥೆರಪಿ, ಅಲೈಡ್ ಹೆಲ್ತ್ ಸೈನ್ಸ್ ವರ್ಗದವರಿಂದ ಜಾಲಪ್ಪ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಭ್ರಷ್ಟಾಚಾರವು ನಮ್ಮ ಆಡಳಿತವ್ಯವಸ್ಥೆಯನ್ನು ಕೆಡಿಸುತ್ತದೆ. ಇದರಿಂದಾಗಿ ಸಮಾಜದಲ್ಲಿ ಜನ ಜೀವನ ಏರು ಪೇರಾಗುತ್ತದೆ ಎಂದರು.

ಭ್ರಷ್ಟಾಚಾರ ಸಾಮಾಜಿಕ ಪಿಡುಗಾಗಿದ್ದು ಸರ್ಕಾರಿ ಕಚೇರಿ ಮತ್ತು ಸರ್ಕಾರದ ಕೆಲಸ ಕಾರ್ಯಗಳಲ್ಲಿ ವ್ಯಾಪಕವಾಗಿದೆ. ಇದರ ನಿರ್ಮೂಲನೆ ಆಗಬೇಕು. ಯಾವುದೇ ಕಚೇರಿಯಲ್ಲಿ ಯಾವುದೇ ಕೆಲಸ ಆಗಬೇಕಾದರೂ ಹಣ ಕೊಡಬೇಕಾದ ದುಸ್ಥಿತಿ ಇದೆ.

ಹಣವಿಲ್ಲದೆ ಯಾವ ಕೆಲಸವೂ ಆಗುತ್ತಿಲ್ಲ, ಇತ್ತೀಚಿನ ದಿನಗಳಲ್ಲಿ ಭ್ರಷ್ಟಾಚಾರ ಎಂಬುದು ಗಂಭೀರ ಸಮಸ್ಯೆಯಾಗಿದೆ ಎಂದರು.

**ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ:** ಇಂದಿನ ವಿದ್ಯಾರ್ಥಿಗಳಲ್ಲಿಯೇ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಬೇಕು ಕೆಳ ಹಂತದಿಂದಲೇ ಇದರ ನಿರ್ಮೂಲನೆ ಆಗಬೇಕು, ಜನರಲ್ಲಿ ದೇಶ ಭಕ್ತಿ, ಸಾಮಾಜಿಕ ಕಳಕಳಿ ಬೆಳೆಯಬೇಕು, ಎಲ್ಲರೂ ನಮ್ಮಂತೆಯೇ ಎಂಬುದು ಎಲ್ಲರಲ್ಲಿ ಬರಬೇಕು ಎಂದು ಹಿತವಚನ ನೀಡಿದರು.



ಕೋಲಾರದ ಅಂತರಗಂಗೆ ರಸ್ತೆಯಲ್ಲಿರುವ ಜಾಲಪ್ಪ ಆಸ್ಪತ್ರೆಯಲ್ಲಿ ಭ್ರಷ್ಟಾಚಾರ ನಿರ್ಮೂಲನಾ ಜಾಥಾ ಕಾರ್ಯಕ್ರಮದ ವೇಳೆ ಜಾಗೃತಿ ಮೂಡಿಸುವ ಕರಪತ್ರಗಳನ್ನು ವಿತರಿಸುತ್ತಿರುವುದು.

**ಎಲ್ಲರ ಸಹಕಾರ ಅಗತ್ಯ:** ಫಿಜಿಯೋಥೆರಫಿ ಹೆಚ್.ಓ.ಡಿ ರಮೇಶ್ ಹಾಗೂ ಇನ್ನಿತರರು ಭ್ರಷ್ಟಾಚಾರದ ಬಗ್ಗೆ ಮಾತನಾಡಿ, ಭ್ರಷ್ಟಾಚಾರವನ್ನು ಕೊನೆಗೊಳಿಸುವುದು ನಮ್ಮೆಲ್ಲರ ಕರ್ತವ್ಯ. ಇಬ್ಬರಿಂದ ಸಾಧ್ಯವಿಲ್ಲ, ಇದಕ್ಕಾಗಿ ಎಲ್ಲರೂ ಕೈಜೋಡಿಸಬೇಕು ಎಂದರು. ಭ್ರಷ್ಟಾಚಾರದ ನಿರ್ಮೂಲನೆಯ ಕರಪತ್ರಗಳನ್ನು ಹಂಚುವ ಮೂಲಕ ಭ್ರಷ್ಟಾಚಾರದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಆರ್.ಎಲ್ ಜಾಲಪ್ಪ ಆಸ್ಪತ್ರೆಯಿಂದ ಕ್ಲಾಕ್ ಟವರ್ ವರೆಗೆ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಉದಯವಾಣಿ



ಕೋಲಾರ ನಗರದ ಅಂತರಗಂಗೆ ರಸ್ತೆಯಲ್ಲಿರುವ ಜಾಲಪ್ಪ ಆಸ್ಪತ್ರೆಯ ಯುವ ವೈದ್ಯರು ಕ್ಲಾಕ್ ಟವರ್‌ವರೆಗೆ ಭ್ರಷ್ಟಾಚಾರದ ವಿರುದ್ಧ ಜಾಥಾ ನಡೆಸಿ, ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಪ್ರಾಂಶುಪಾಲ ಲಕ್ಷ್ಮಯ್ಯ, ರಮೇಶ್ ಇದ್ದರು.

ಉದಯವಾಣಿ

# ಭ್ರಷ್ಟಾಚಾರ ವಿರುದ್ಧ ಜಾಥಾ

ಕೋಲಾರ: ಭ್ರಷ್ಟಾಚಾರದ ಬಗ್ಗೆ ಅರಿವು ಮೂಡಿಸುವುದಕ್ಕಾಗಿ ನಗರದ ಅಂತರಗಂಗೆ ರಸ್ತೆಯಲ್ಲಿರುವ ಜಾಲಪ್ಪ ಆಸ್ಪತ್ರೆಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಅರಸು ಮೆಡಿಕಲ್ ಕಾಲೇಜಿನ ಡಿಪಾರ್ಟ್‌ಮೆಂಟ್ ಆಫ್ ಫಿಜಿಯೋಥೆರಪಿ, ಅಲೈಡ್ ಹೆಲ್ತ್ ಸೈನ್ಸ್ ವರ್ಗದವರಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು. ಪ್ರಾಂಶುಪಾಲ ಲಕ್ಷ್ಮಯ್ಯ, ಫಿಜಿಯೋಥೆರಪಿ ಎಚ್.ಒ.ಡಿ. ರಮೇಶ್ ಇದ್ದರು. ಜಾಲಪ್ಪ ಆಸ್ಪತ್ರೆಯಿಂದ ಕ್ಲಾಕ್ ಟವರ್ ವರೆಗೆ ಜಾಥಾ ನಡೆಯಿತು.